ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಸಚಿವರು):

ಸಮಾಜ ಕಲ್ಯಾಣ ಇಲಾಖೆ (ಪ.ಜಾತಿ : ಪ.ವರ್ಗ)

1995-96ನೇ ಸಾಲಿನಲ್ಲಿ 40 ಮೆಟ್ರಿಕ್‌ಪೂರ್ವ ಹಾಗೂ 39 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ.

ಬಿ.ಸಿ.ಎಂ. ಇಲಾಖೆ:

1995-96ನೇ ಸಾಲಿನಲ್ಲಿ 50 ಮೆಟ್ರಿಕ್‌ಪೂರ್ವ ಮತ್ತು 25 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ.

ವಿಷಯ : ಹಿಂದುಳಿದ ವರ್ಗಗಳ ಮೀಸಲಾತಿ ಜಾರಿಗೆ ನಿಯಮಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 753(726)

ಶ್ರೀ ಕುಂಬ್ಳೆ ಸುಂದರರಾವ್ (ಸುರತ್ಕಲ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ. ರಾಜ್ಯದಲ್ಲಿ ಹಿಂದುಳಿದ ವರ್ಗಗಳಿಗೆ ಮೀಸಲಾತಿಯ ಕುರಿತಾಗಿ ಜಾರಿ ಮೀಸಲಾತಿಯ ಕುರಿತಾಗಿ ಜಾರಿಯಲ್ಲಿರುವ ನಿಯಮಗಳೇನು;

ಆ. ಪ್ರಸಕ್ತ ವರ್ಷದಲ್ಲಿ ವೃತ್ತಿ ಶಿಕ್ಷಣಕ್ಕೆ ಸಂಬಂಧಪಟ್ಟ ಹಾಗೆ ಈ ಆದೇಶವನ್ನು ಜಾರಿಗೊಳಿಸಲಾಗಿದೆಯೇ?

ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಸಚಿವರು):

ಅ. ರಾಜ್ಯದಲ್ಲಿ ಹಿಂದುಳಿದ ವರ್ಗಗಳಿಗೆ ಮೀಸಲಾತಿ ಕುರಿತಂತೆ ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶವನ್ನು ಪಡೆಯಲು ಭಾರತ ಸಂವಿಧಾನದ ಅನುಚ್ಛೇದ 5(4)ರ ಮೇರೆಗೆ (1994-95ನೇ ಸಾಲಿಗೆ) ಸರ್ಕಾರಿ ಆದೇಶ ಸಂಖ್ಯೆ ಸಕಇ 150 ಬಿಸಿಎ 94 ದಿನಾಂಕ: 17-9-94 ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿಗೆ ಭಾರತ ಸಂವಿಧಾನದ ಅನುಚ್ಛೇದ 16(4) ರ ಮೇರೆಗೆ ಸರ್ಕಾರಿ ಆದೇಶ ಸಂಖ್ಯೆ ನಕಇ 251 ಬಿಸಿಎ 94 ದಿನಾಂಕ : 31-1-1995 (31-5-1995 ರವರೆಗೆ)ಗಳಲ್ಲಿ ಹೊರಡಿಸಿರುವಂತೆ ನಿಯಮಗಳು ಜಾರಿಯಲ್ಲಿರುತ್ತದೆ.

ಆ. ಪ್ರಸಕ್ತ ವರ್ಷದಲ್ಲಿ (ಅಂದರೆ 1994-95ನೇ ಸಾಲಿಗೆ ವೃತ್ತಿ ಶಿಕ್ಷಣಕ್ಕೆ ಸಂಬಂಧಪಟ್ಟ ಹಾಗೆ ಭಾರತ ಸಂವಿಧಾನದ ಅನುಚ್ಛೇದ 15(4) ಮೇರೆಗೆ ಆದೇಶ ಸಂಖ್ಯೆ ಸಕಇ 150 ಬಿಸಿಎ 94 ದಿನಾಂಕ : 17-9-1994 ಜಾರಿಯಲ್ಲಿದೆ.

ವಿಷಯ : ಸೂರತ್ಕಲ್‌ನಗರದ ಮಧ್ಯದಲ್ಲಿರುವ ಹೊಟೆಲ್‌ಗಳ ಕಲ್ಮಶ ನೀರು ಜನರು ನಡೆದಾಡುವ ರಸ್ತೆಯಲ್ಲಿ ಹರಿಯುತ್ತಿರುವುದರ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 754(1024)

ಶ್ರೀ ಕುಂಬ್ಳೆ ಸುಂದರ್‌ರಾವ್ (ಸೂರತ್ಕಲ್) ಮಾನ್ಯ ನಗರಾಭಿವೃದ್ಧಿ ಮತ್ತು ಕಾಡಾ ಕರ್ನಾಟಕ ಹೈದರಾಬಾದ್ ಅಭಿವೃದ್ಧಿ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ